ಅನುಬಂಧ - VIII

ಭಾಗ - II

ದಿನಾಂಕ 6.1.2004ರ ಚುಕ್ಕೆ ಗುರುತಿನ ಪ್ರಶ್ನೋತ್ತರ

ಹುಬ್ಬಳ್ಳಿ ಧಾರವಾಡ ಮಹಾನಗರದಲ್ಲಿ ಕುಡಿಯುವ ನೀರಿನ ಸಮಸ್ಯೆಯ ಬಗ್ಗೆ

01 (279) : ಶ್ರೀ ಬೆಲ್ಲದ್ ಚಂದ್ರಕಾಂತ ಗುರಪ್ಪ (ಧಾರವಾಡ) ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಹುಬ್ಬಳ್ಳಿ ಧಾರವಾಡ ಮಹಾನಗರಕ್ಕೆ ಹಾಲಿ ಎಷ್ಟು ದಿನಕ್ಕೆ ಒಮ್ಮೆ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತಿದೆ;

ಆ) ಕುಡಿಯುವ ನೀರಿನ ಸಮಸ್ಯೆ ದಿನೇ ದಿನೇ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಇ) ಬಂದಿದ್ದಲ್ಲಿ ಸರ್ಕಾರ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಏನು ಕ್ರಮ ಕೈಗೊಂಡಿದೆ;

ಈ) ಹುಬ್ಬಳ್ಳಿ ಧಾರವಾಡ ಮಹಾನಗರದಲ್ಲಿ ಒಳಚರಂಡಿ ವ್ಯವಸ್ಥೆಗೆ ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಎಸ್. ಎಂ. ಕೃಷ್ಣ (ಮುಖ್ಯಮಂತ್ರಿಯವರು) :

ಅ) ಹುಬ್ಬಳ್ಳಿ ಧಾರವಾಡ ಮಹಾನಗರಕ್ಕೆ ಹಾಲಿ 7 ದಿನಗಳಿಗೆ ಒಮ್ಮೆ ಮಲಪ್ರಭಾ ನದಿಯಿಂದ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತಿದೆ.

ಆ) ಅವಳಿ ನಗರಕ್ಕೆ 2 ಮುಖ್ಯ ನೀರಿನ ಮೂಲಗಳಲ್ಲಿ ಒಂದಾದ ನೀರಸಾಗರ ಜಲಾಶಯವು ಸತತ ಮೂರು ವರ್ಷಗಳ ಬರಗಾಲದಿಂದಾಗಿ ಪೂರ್ಣವಾಗಿ ಬತ್ತಿ ಹೋಗಿರುವುದರಿಂದ ಕುಡಿಯುವ ನೀರಿನ ಸಮಸ್ಯೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುವುದು.

ಇ) 1) ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಮಲಪ್ರಭಾ ಜಲಾಶಯದಲ್ಲಿ ಸಾಕಷ್ಟು (2.80 TMC ft.) ನೀರಿನ ಸಂಗ್ರಹವನ್ನು ಕಾದಿರಿಸಲಾಗಿದೆ.

2) ಬರಪರಿಹಾರ ಕಾರ್ಯಕ್ರಮದ ಅಡಿಯಲ್ಲಿ ವಿತರಣಾ ವ್ಯವಸ್ಥೆಯಲ್ಲಿ ಸುಧಾರಣೆಗೆ ಈಗಾಗಲೇ ರೂ. 21.50 ಲಕ್ಷಗಳ ವೆಚ್ಚದ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ ಮತ್ತು 39.10 ಲಕ್ಷ ರೂ.ಗಳ ಅಂದಾಜು ವೆಚ್ಚದಲ್ಲಿ ಮುಖ್ಯ ಪೂರಕ ಕೊಳವೆಗಳ ಹಾಗು ಇತರೇ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ.

3) ಹುಬ್ಬಳ್ಳಿ ಧಾರವಾಡ ತುರ್ತು ನೀರು ಸರಬರಾಜು ಯೋಜನೆಯನ್ನು ಮಾರ್ಚ್ 2004 ಅಂತ್ಯದೊಳಗೆ ಕಾರ್ಯಗತಗೊಳಿಸಲು ಕ್ರಮ ಕೈಗೊಳ್ಳಲಾಗಿದೆ.

4) ಅಮ್ಮಿನಭಾವಿಯಿಂದ ಹುಬ್ಬಳ್ಳಿಗೆ ನೇರವಾಗಿ ನೀರು ಸರಬರಾಜು ಮಾಡಲು ಕೊಳವೆ ಮಾರ್ಗ ಅಳವಡಿಕೆ ಯೋಜನೆಯನ್ನು ವಿಶ್ವ ಬ್ಯಾಂಕ್ ಸಹಾಯದೊಂದಿಗೆ (KUWASSIP) : ಎ ಯೋಜನೆಯಲ್ಲಿ ರೂ. 3852.00 ಲಕ್ಷಗಳ ಯೋಜನೆ ಶೀಘ್ರ ಕೈಗೆತ್ತಿಕೊಳ್ಳಲಾಗುವುದು.

5) ಹುಬ್ಬಳ್ಳಿ ಧಾರವಾಡ ನಗರಕ್ಕೆ ಮಲಪ್ರಭಾ ಜಲಾಶಯದಿಂದ ನೀರೊದಗಿಸುವ 3ನೇ ಹಂತದ ರೂ. 144.00 ಕೋಟಿಗಳ ಯೋಜನೆ ಸರ್ಕಾರಕ್ಕೆ ಸಲ್ಲಿಸಲಾಗಿದ್ದು, ಪರಿಶೀಲನೆಯಲ್ಲಿದೆ.

4) ಹುಬ್ಬಳ್ಳಿ ಧಾರವಾಡ ಅವಳಿ ನಗರದ ಸುತ್ತ ಮುತ್ತಲೂ ಬೆಳೆದಿರುವ ಹೊಸ ಬಡಾವಣೆಗಳನ್ನು ಗಮನಕ್ಕೆ ತೆಗೆದುಕೊಂಡು ವಿವರವಾದ ಅಂದಾಜನ್ನು ತಯಾರಿಸಲು ಸರ್ವೆ ಕಾರ್ಯಕ್ಕೆ ಗುತ್ತಿಗೆ ಕರೆಯಲಾಗಿದ್ದು, ಗುತ್ತಿಗೆ ನಿಗದಿಪಡಿಸುವ ಪ್ರಕ್ರಿಯೆ ಅಂತಿಮ ಹಂತದಲ್ಲಿದೆ. ಶೀಘ್ರವೇ ಯೋಜನೆ ಅಂದಾಜನ್ನು ತಯಾರಿಸಲು ಕ್ರಮ ಜರುಗಿಸಲಾಗಿದೆ.

ಚಿಂತಾಮಣಿ ನಗರಸಭಾ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಅಭಾವದ ಬಗ್ಗೆ

02 (113) : ಶ್ರೀ ಚೌಡಾರೆಡ್ಡಿ (ಚಿಂತಾಮಣಿ) ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಿಂತಾಮಣಿ ನಗರಸಭೆಯ ವ್ಯಾಪ್ತಿಯಲ್ಲಿರುವ ಸಾರ್ವಜನಿಕರಿಗೆ ಕುಡಿಯುವ ನೀರಿಗಾಗಿ ಎಷ್ಟು ಕೊಳವೆ ಬಾವಿಗಳನ್ನು ಕೊರೆಯಲಾಗಿದೆ; ಇದರಲ್ಲಿ ಎಷ್ಟು ಕೊಳವೆ ಬಾವಿಗಳಲ್ಲಿ ನೀರು ಸಿಗುತ್ತಿದೆ;

ಆ) ಅನೇಕ ಬಡ ಜನರಿರುವ ಕಾಲೋನಿಗಳಲ್ಲಿ ಕುಡಿಯುವ ನೀರಿಗೆ ಬಹಳ ತೊಂದರೆ ಆಗಿದ್ದು, ಮತ್ತು ಸರ್ಕಾರಿ ಬಾಲಕರ ಮತ್ತು ಬಾಲಕಿಯರ ಕಾಲೇಜುಗಳಲ್ಲಿ ನೀರಿನ ಕೊರತೆ ಜಾಸ್ತಿ ಇದ್ದು, ವಿದ್ಯಾರ್ಥಿಗಳಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ನೀರಿನ ಅಭಾವ ನೀಗಿಸಲು ಸರ್ಕಾರ ಅತೀ ಜರೂರಾಗಿ ಕ್ರಮ ತೆಗೆದುಕೊಂಡು ಸಾರ್ವಜನಿಕರ ಮತ್ತು ವಿದ್ಯಾರ್ಥಿಗಳ ತೊಂದರೆ ನಿವಾರಿಸಲು ಕ್ರಮ ತೆಗೆದುಕೊಳ್ಳಲಾಗುತ್ತದೆಯೇ?

ಶ್ರೀ ಡಿ.ಕೆ. ಶಿವಕುಮಾರ್ (ನಗರಾಭಿವೃದ್ಧಿ ಸಚಿವರು) :

ಅ) ಚಿಂತಾಮಣಿ ನಗರದಲ್ಲಿ ಒಟ್ಟು 98 ಕೊಳವೆ ಬಾವಿಗಳನ್ನು ಕೊರೆಯಲಾಗಿದೆ. ಇದರಲ್ಲಿ 73 ಕೊಳವೆ ಬಾವಿಗಳಲ್ಲಿ ನೀರು ಸಿಗುತ್ತಿದೆ.

ಆ) ಹೌದು.

ಇ) ನೀರಿನ ಅಭಾವ ನೀಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅನಧಿಕೃತ ಪಂಪ್ ಸೆಟ್ಟುಗಳ ಬಗ್ಗೆ

03 (307) : ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಎಷ್ಟು ಅನಧಿಕೃತ ಪಂಪ್ ಸೆಟ್‌ಗಳು ಕಾರ್ಯನಿರ್ವಹಿಸುತ್ತಿವೆ;

ಆ) ಕಳೆದ 1 ವರ್ಷದಿಂದ ಪಂಪ್‌ಸೆಟ್‌ಗಳ ಅಕ್ರಮ ಸಂಪರ್ಕವನ್ನು ಸಕ್ರಮಗೊಳಿಸಲು ಎಷ್ಟು ಅರ್ಜಿಗಳು ಬಂದಿವೆ; ಇವುಗಳಲ್ಲಿ ಎಷ್ಟು ಅರ್ಜಿಗಳನ್ನು ಪುರಸ್ಕರಿಸಲಾಗಿದೆ ಮತ್ತು ತಿರಸ್ಕೃತಗೊಂಡ ಅರ್ಜಿಗಳು ಎಷ್ಟು;